# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1330
ಸದಸ್ಯರ ಹೆಸರು : ಶ್ರೀ ಎಸ್.ವಿ.ಸಂಕನೂರ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 29.12.2022.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ನಿವೇಶನಗಳು ಮತ್ತು ಮನೆಗಳಿಗೆ ಇ-ಸ್ವತ್ತು ಮಾಡಿಕೊಡಲು ಇರುವ ನಿಯಮ ಮತ್ತು ಮಾನದಂಡಗಳೇನು; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು 2006 ರ ನಿಯಮ 28 ಮತ್ತು 30 ರಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ-9 ಮತ್ತು 11ಎ ವಿತರಿಸುತ್ತಾರೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು 2006 ರ ನಿಯಮ 30 ರಂತೆ ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ 11ಬಿ ವಿತರಿಸುತ್ತಾರೆ.<br><br>ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು (ತೆರಿಗೆ ನಿರ್ಧರಣೆ ಪಟ್ಟಿ) ವಿತರಿಸಲು ಗ್ರಾಮ ಪಂಚಾಯತಿ ಸಭೆಯ ಅನುಮೋದನೆ ಅಗತ್ಯವಿದ್ದು, ಸದರಿ ಸಭೆಯನ್ನು ನಿಯಮಿತವಾಗಿ ಮತ್ತು ತ್ವರಿತವಾಗಿ ಮಾಡದ ಕಾರಣ ಮತ್ತು ಅರ್ಜಿಗಳನ್ನು ಜೇಷ್ಠತೆ ಆಧಾರದಲ್ಲಿ ವಿಲೇ ಮಾಡದಿರುವುದರಿಂದ ನಮೂನೆಗಳನ್ನು ವಿತರಿಸಲು ವಿಳಂಬವಾಗುತ್ತಿದ್ದು, ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು |

| | | |
|---|---|---|
| | | ಇತ್ಯರ್ಥಪಡಿಸಲು (First In First Out-FIFO) ಕ್ರಮ ವಹಿಸುವಂತೆ ಹಾಗೂ ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ವಿಲೇ ಇಡದಂತೆ ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ.<br><br>ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ–ಸ್ವತ್ತು ತಂತ್ರಾಂಶದ ಮೂಲಕ ನಮೂನೆ–9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ದಾಖಲೆಗಳ ಚೆಕ್‌ಲಿಸ್ಟ್‌ಗಳನ್ನು ಗ್ರಾಮ ಪಂಚಾಯತಿಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಅಳವಡಿಸುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ.<br><br>ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ನಿರ್ವಹಣೆಗೆ ಇ–ಆಸ್ತಿ ತಂತ್ರಾಂಶವನ್ನು ಬಳಕೆ ಮಾಡಲಾಗುತ್ತಿದ್ದು, ತಂತ್ರಾಂಶದಲ್ಲಿ ಆಸ್ತಿಯ ಮಾಹಿತಿಯನ್ನು ದಾಖಲಿಸುವ ಸಮಯದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ: DMA 29 PTIS/2015-16, ದಿನಾಂಕ: 20–04–2016 ರಲ್ಲಿ ನಿರ್ದಿಷ್ಟಪಡಿಸಿದ ದಾಖಲೆಗಳನ್ನು ಅಪ್‌ಲೋಡ್ ಮಾಡಿದಲ್ಲಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದಂತಹ ಎಲ್ಲಾ ಅಧಿಕೃತ ಆಸ್ತಿಗಳಿಗೆ ನಮೂನೆ–3 (ಇ–ಆಸ್ತಿ ಖಾತಾ) ನೀಡಲಾಗುತ್ತದೆ. ನಿಯಮ ಉಲ್ಲಂಘಿಸಿ ತೆರೆದಿರುವ ಸ್ವತ್ತುಗಳಿಗೆ ನಮೂನೆ–3 ಅನ್ನು ನೀಡಲಾಗುತ್ತಿಲ್ಲ. |
| (ಆ) | ಇ–ಸ್ವತ್ತನ್ನು ಮಾಡಿಕೊಡಲು ನಿಗದಿಪಡಿಸಿರುವ ಅರ್ಜಿ ಶುಲ್ಕ ಹಾಗೂ ಕಾಲಮಿತಿಯೇನು; (ಮಾಹಿತಿ ನೀಡುವುದು) (ನಗರ ಮತ್ತು ಗ್ರಾಮೀಣಗಳಲ್ಲಿ) | ಇ–ಸ್ವತ್ತು ತಂತ್ರಾಂಶದ ಮೂಲಕ ನಮೂನೆ–9 ಮತ್ತು 11 ಎ ವಿತರಿಸಲು ನಿಗಧಿಪಡಿಸಿರುವ ಅರ್ಜಿ ಶುಲ್ಕ ರೂ. 100/–ಗಳು ಮತ್ತು ನಮೂನೆ–11ಬಿ ವಿತರಿಸಲು ನಿಗಧಿಪಡಿಸಿರುವ ಅರ್ಜಿ ಶುಲ್ಕ ರೂ. 50/–ಗಳು.<br><br>ಆಸ್ತಿ ವಿವರಗಳ ವಹಿಯಲ್ಲಿ ಮಾಲೀಕರ ಹೆಸರು ಸೇರ್ಪಡೆ, ಬದಲಾವಣೆಗೆ ರೂ. 1000/- ಶುಲ್ಕವನ್ನು ವಿಧಿಸಲು ಅವಕಾಶ ಕಲ್ಪಿಸಲಾಗಿದೆ.<br><br>ನಮೂನೆಗಳನ್ನು ವಿತರಿಸುವುದು ಸಕಾಲ ಸೇವೆಯ ಕಾರ್ಯ ವ್ಯಾಪ್ತಿಗೆ ಸೇರ್ಪಟ್ಟಿದ್ದು, 45 ದಿನಗಳೊಳಗೆ ಅರ್ಜಿದಾರರು ನಿಯಮಗಳ ಪ್ರಕಾರ ಎಲ್ಲಾ ದಾಖಲಾತಿಗಳನ್ನು ಅವರು ಒದಗಿಸಿದ್ದಲ್ಲಿ ನೀಡಬೇಕಾಗಿರುತ್ತದೆ.<br><br>ನಗರ ಪ್ರದೇಶಗಳಲ್ಲಿ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ಹಾಗೂ ಕರ್ನಾಟಕ |

| | | |
|---|---|---|
| | | ಪೌರಸಭೆಗಳ ಅಧಿನಿಯಮ 1964 ರನ್ವಯ ನಗರ ಸ್ಥಳೀಯ ಸಂಸ್ಥೆಗಳು ನಿಗಧಿಪಡಿಸಿದ ಶುಲ್ಕವನ್ನು ಪಾವತಿಸಿಕೊಂಡು ನಮೂನೆ-03 ನೀಡಲಾಗುವುದು. ಸರ್ಕಾರದ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ದಾಖಲಾತಿಗಳೊಂದಿಗೆ ನಗರ ಸ್ಥಳೀಯ ಸಂಸ್ಥೆಗೆ ಅರ್ಜಿ ಸಲ್ಲಿಸಿದ 45 ದಿನಗಳ ಅವಧಿಯೊಳಗೆ ಇ-ಆಸ್ತಿ ಖಾತಾ ಮಾಡಿ ಕೊಡಲು ಕ್ರಮ ವಹಿಸಲಾಗುವುದು. |
| (ಇ) | ಗ್ರಾಮೀಣ ರಸ್ತೆ, ಜಿಲ್ಲಾ ರಸ್ತೆ ಹಾಗೂ ರಾಷ್ಟ್ರೀಯ ರಸ್ತೆ ಬದಿಯಲ್ಲಿ ಸುಮಾರು ವರ್ಷಗಳಿಂದ ಇರುವ ನಿವೇಶನಗಳ/ ಮನೆಗಳಿಗೆ ಇ-ಸ್ವತ್ತು ಮಾಡಿಕೊಡಲು ಇರುವ ನಿಯಮ ಹಾಗೂ ಮಾನದಂಡಗಳೇನು ಹಾಗೂ ವಾರಸುದಾರರ ನಿವೇಶನ/ಮನೆಯ ನಿಖರ ಅಳತೆಗೆ ತಕ್ಕಂತೆ ಇ-ಸ್ವತ್ತು ಮಾಡಬೇಕಾಗಿದ್ದು ಒಂದು ವೇಳೆ ರಸ್ತೆಗಳ ಅಗಲೀಕರಣ/ ಮೇಲ್ದರ್ಜೆಗೇರಿಸುವಾಗ ಭೂಮಿಯನ್ನು ಕಳೆದುಕೊಂಡ ವಾರಸುದಾರರಿಗೆ ನೀಡುವ ಪರಿಹಾರ ಧನದ ಮಾಹಿತಿಯನ್ನು ನೀಡುವುದು ಹಾಗೂ ಈ ಬಗ್ಗೆ ಇರುವ ಮಾನದಂಡಗಳೇನು? (ಗ್ರಾಮೀಣ, ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರೀಯ ರಸ್ತೆಗಳ ಕುರಿತು ಮಾಹಿತಿ ನೀಡುವುದು) | ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರಸ್ತೆಗಳ ಅಗಲೀಕರಣ/ ಮೇಲ್ದರ್ಜೆಗೇರಿಸುವಾಗ ಭೂಮಿಯನ್ನು ಕಳೆದುಕೊಂಡ ಮಾಲೀಕರಿಗೆ ನಿವೇಶನ/ಜಾಗದ ಅಳತೆ ವಿವರಗಳ ಮಾಹಿತಿ ಪಡೆದುಕೊಂಡು ಪರಿಹಾರ ಧನ ನೀಡುವ ಕುರಿತು ಭೂಸ್ವಾಧೀನ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರದ ಹಕ್ಕು, ಪುನರ್ವಸತಿ ಮತ್ತು ಪುನರ್ ವ್ಯವಸ್ಥೆ ಕಾಯ್ದೆ-2013 ರನ್ವಯ ಕ್ರಮ ವಹಿಸಲಾಗುವುದು. |

ಸಂ. ಗ್ರಾಅಪ 392 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ